ಡಾ॥ ವೈ. ನಾಗಪ್ಪ (ಸಮಾಜ ಕಲ್ಯಾಣ ಸಚಿವರು) :

ಅ & ಆ) ಸಮಾಜ ಕಲ್ಯಾಣ ಇಲಾಖೆಯಲ್ಲಿ ಪರಿಶಿಷ್ಟ ಜಾತಿಯ ಅಭ್ಯರ್ಥಿಗಳಿಗೆ ಕಂಪ್ಯೂಟರ್ ತರಬೇತಿ ಕಾರ್ಯಕ್ರಮದಡಿ ನೀಡಿರುವ ತರಬೇತಿ ಬಗ್ಗೆ ಹಾಗೂ ವಸತಿ ನಿಲಯಗಳಿಗೆ ಮೂಲಭೂತ ಸೌಕರ್ಯಗಳನ್ನು ಒದಗಿಸಿರುವ ಬಗ್ಗೆ ಮಾನ್ಯ ಲೋಕಾಯುಕ್ತರಿಂದ ವರದಿ ಬಂದಿದ್ದು ಅದು ಸರ್ಕಾರದ ಪರಿಶೀಲನೆಯಲ್ಲಿದೆ.

ಖಿಲಖಿಖಿ (ಳಒಖಿಒ) ಶ್ರೀ ಅಂಗಾರ ಎಸ್ (ಸುಳ್ಯ) :- ಮಾನ್ಯ ಸಮಾಜ ಕಲ್ಯಾಣ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಕೇಂದ್ರದಲ್ಲಿರುವ ಕಲ್ಯಾಣ ಇಲಾಖೆಗೆ ಸೇರಿದ ವಿದ್ಯಾರ್ಥಿನಿ ನಿಯಮಗಳಲ್ಲಿ ಬೇಡಿಕೆ ಹೆಚ್ಚಾಗಿದ್ದು, ಪ್ರವೇಶ ಸಿಗದೆ ಅನೇಕ ವಿದ್ಯಾರ್ಥಿನಿಲಯ ವಿದ್ಯಾಭ್ಯಾಸವನ್ನು ಮುಂದುವರೆಸಲು ತೊಂದರೆಯಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

ಆ) ಬಂದಿದ್ದಲ್ಲಿ, ಈ ಬಗ್ಗೆ ಸರ್ಕಾರ ಯಾವ ಕ್ರಮ ಕೈಗೊಂಡಿದೆ?

ಡಾ॥ ವೈ. ನಾಗಪ್ಪ (ಸಮಾಜ ಕಲ್ಯಾಣ ಸಚಿವರು) :

ಅ) ಹೌದು.

ಆ) ಪರಿಶಿಷ್ಟ ಜಾತಿಯ ಸರ್ಕಾರಿ ಮೆಟ್ರಿಕ್ ಪೂರ್ವ ಬಾಲಕರ ಮತ್ತು ಬಾಲಕಿಯರ ವಿದ್ಯಾರ್ಥಿನಿಲಯ ಗಳಿಗೆ ಸಂಖ್ಯಾಬಲ ಹೆಚ್ಚಿಸುವ ಬಗ್ಗೆ ಪರಿಶೀಲಿಸಲಾಗುತ್ತಿದೆ.

ಖಿಲಖಿಳ (ಳಖಿಲಖಿ) ಶ್ರೀ ಅನಿಲ್ ಹೆಚ್. ಲಾಡ್(ಕೂಡ್ಲಿಗಿ) :- ಮಾನ್ಯ ಬೃಹತ್, ಮಧ್ಯಮ, ಸಣ್ಣ ಕೈಗಾರಿಕೆ ಹಾಗೂ ಮೂಲಭೂತ ಸೌಕರ್ಯ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಬಳ್ಳಾರಿ ಜಿಲ್ಲೆಯಲ್ಲಿ ಅನೇಕ ಕೈಗಾರಿಕೆಗಳಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

ಆ) ಯಾವ ಕೈಗಾರಿಕೆಯಲ್ಲಿಯೂ ಸಹ ಸರೋಜಿನಿ ಮಹಿಷಿ ವರದಿಯನ್ನು ಇದುವರೆಗೂ ಜಾರಿಗೆ ತರದಿರಲು ಕಾರಣಗಳೇನು;

ಇ) ಬಳ್ಳಾರಿ ಜಿಲ್ಲೆಯಲ್ಲಿನ ಹೆಚ್ಚಿನ ಸಂಖ್ಯೆಯ ಕನ್ನಡಿಗರನ್ನು ನೇಮಕಾತಿ ಮಾಡಿಕೊಳ್ಳುವ ಯೋಜನೆಗಳನ್ನೇನಾದರೂ ರೂಪಿಸಲಾಗಿದೆಯೇ?